ಉಡುಪಿ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ಚಾಲಕರ ಖಾಲಿ ಹುದ್ದೆಗಳು.

799(1215) ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಮತ್ತು ಮಂಜೂರಾದ ಒಟ್ಟು ವಾಹಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ)

ಆ) ಆ ಬಗ್ಗೆ ಕೊರತೆ ಇರುವ ಚಾಲಕರ ಸಂಖ್ಯೆ ಎಷ್ಟು?

ಇ) ಈ ಕೊರತೆಯನ್ನು ಎಂದು ಸರಿಪಡಿಸಲಾಗುವುದು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಉಡುಪಿ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಹಾಲಿ ಇರುವ ಮತ್ತು ಮಂಜೂರಾದ ಒಟ್ಟು ವಾಹನಗಳ ಸಂಖ್ಯೆ - 20

ತಾಲ್ಲೂಕುವಾರು ವಿವರ:

ಉಡುಪಿ	-	7
ಕುಂದಾಪುರ	-	9
ಕಾರ್ಕಳ	-	4
	ಒಟ್ಟು	20

ಆ) ಮಂಜೂರಾಗಿರುವ ವಾಹನ ಚಾಲಕರ ಹುದ್ದೆಗಳ ಪೈಕಿ ಪ್ರಸ್ತುತ 12 ಜನ ವಾಹನ ಚಾಲಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೊರತೆ ಇರುವ 22 ವಾಹನ ಚಾಲಕರ ವಿವರಗಳು ಈ ಕೆಳಗಿನಂತಿವೆ.

ತಾಲ್ಲೂಕುವಾರು ವಿವರ:

1. ಉಡುಪಿ	-	15
2. ಕುಂದಾಪುರ-	-	5
3. ಕಾರ್ಕಳ	-	2
	ಒಟ್ಟು	22

ಇ) ಸರ್ಕಾರವು 410 ವಾಹನ ಚಾಲಕರು ಹುದ್ದೆಯನ್ನು ಭರ್ತಿ ಮಾಡಲು ಈಗಾಗಲೇ ಅನುಮತಿ ನೀಡಲಾಗಿದೆ ಅದರಂತೆ ವಾಹನ ಚಾಲಕರ ಹುದ್ದೆಗಳನ್ನು ನೇಮಕಾತಿ ಮಾಡುವ ಕ್ರಮ ಕೈಗೊಳ್ಳಲಾಗಿದೆ.

ರಾಜ್ಯದಲ್ಲಿರುವ ಮಹಿಳಾ ವೈದ್ಯಧಿಕಾರಿಗಳು.

801(185) ಶ್ರೀ ರಾಜಶೇಖರ ಶೀಲವಂತ ವೀರಣ್ಣ (ಗುಳೇದಗುಡ್ಡ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇರುವ ಒಟ್ಟು ಮಹಿಳಾ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು? ಆ ಪೈಕಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು (ಜಿಲ್ಲಾ ಪ್ರಕಾರ ವಿವರಣೆ ನೀಡುವುದು).

ಆ) ಪುರುಷ ವೈದ್ಯಾಧಿಕಾರಿಗಳ ಸ್ಥಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ಒದಗಿಸುವುದು).

ಇ) ಬಹಳ ಕಡೆ ಮಹಿಳಾ ವೈದ್ಯಾಧಿಕಾರಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಮಂಜೂರಾದ ಮಹಿಳಾ ವೈದ್ಯಾಧಿಕಾರಿಗಳ ಹುದ್ದೆಗಳ ಸಂಖ್ಯೆ : 835, ಇವರ ಪೈಕಿ ಹಾಲಿ 397 ಜನ ಕಾರ್ಯ ನಿರ್ವಹಿಸುತ್ತಿದ್ದಾರೆ. (ವಿವರ ಲಗತ್ತಿಸಿದೆ)

ಆ) ಪುರುಷ ವೈದ್ಯಾಧಿಕಾರಿಗಳ ಸ್ಥಳಗಳಲ್ಲಿ 195 ಮಹಿಳಾ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. (ವಿವರ ಲಗತ್ತಿಸಿದೆ)

ಇ) ಬಂದಿದೆ.

ಈ) ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ವೈದ್ಯಾಧಿಕಾರಿಗಳನ್ನು 1999ರ ಸಾರ್ವತ್ರಿಕ ವರ್ಗಾವಣೆ ಸಮಯದಲ್ಲಿ ವರ್ಗಾಯಿಸಿ ತುಂಬಲು ಉದ್ದೇಶಿಸಲಾಗಿದೆ. ಶೀಘ್ರದಲ್ಲಿಯೇ 573 ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡುವ ಸಂದರ್ಭದಲ್ಲಿ ಮಹಿಳಾ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.